ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

1

ಇಲಾಖೆ / ವಿಷಯ : DEPARTMENT / SUBJECT: ಗೃಹ - ಡಿ.ಜೆ. ಹಳ್ಳಿ ಗಲಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 18/10/20

# ಚಾರ್ಜ್‌ಶೀಟ್‌ನಿಂದ ಪೇಚಿಗೆ ಸಿಲುಕಿದ ಸಿದ್ದು

**ಬೆಂಗಳೂರು:** ಡಿ.ಜೆ.ಹಳ್ಳಿ ಮತ್ತು ಕೆ.ಜಿ.ಹಳ್ಳಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪೊಲೀಸ್ ಚಾರ್ಜ್‌ಶೀಟ್ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರನ್ನು ಪೇಚಿಗೆ ಸಿಲುಕಿಸಿದೆ.

ಚಾರ್ಜ್‌ಶೀಟ್‌ನಲ್ಲಿ ಮಾಜಿ ಮೇಯರ್ ಸಂಪತ್‌ರಾಜ್ ಹೆಸರು ಉಲ್ಲೇಖವಾಗಿರುವುದು ಹಾಗೂ ಸಂಪತ್‌ರಾಜ್ ಉಚ್ಚಾಟನೆಗೆ ಶಾಸಕ ಅಖಂಡ ಶ್ರೀನಿವಾಸ್‌ಮೂರ್ತಿ ಒತ್ತಾಯಿಸಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಲು ನಿರಾಕರಿಸಿದ ಅವರು, ''ನಾನು ಈ ಬಗ್ಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಜತೆ ಮಾತನಾಡುತ್ತೇನೆ. ನಾನು ಚಾರ್ಜ್‌ಶೀಟ್ ಓದಿಲ್ಲ,'' ಎಂದು ಹೇಳಿದರು.

''ದೂರುದಾರನ ಹೇಳಿಕೆಯನ್ನೇ ಆಧಾರವಾಗಿಟ್ಟುಕೊಂಡು ಶಿಕ್ಷೆ ನೀಡುವುದಕ್ಕೆ ಸಾಧ್ಯವಿಲ್ಲ. ನಿಮಗೆ ಎವಿಡೆನ್ಸ್ ಆಕ್ಟ್ ಗೊತ್ತಾ?'' ಎಂದು ಪ್ರಶ್ನಿಸಿದ್ದಾರೆ. ''ಘಟನೆ ಹಿಂದೆ ಎಸ್‌ಡಿಪಿಐ ಕೈವಾಡ ಇದೆ ಎಂದು ಸಚಿವರಾದ ಬಸವರಾಜ ಬೊಮ್ಮಾಯಿ ಮತ್ತು ಅಶೋಕ್ ಹೇಳಿದ್ದರು. ಈಗೇನು ಹೇಳುತ್ತಾರೆ?'' ಎಂದು ಪ್ರಶ್ನಿಸಿದರು.

## ಅನಾಮಧೇಯನಾ?

''ಕುಸುಮಾ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿರುವುದು ಅಧಿಕಾರ ದುರುಪಯೋಗದ ಸ್ಪಷ್ಟ ನಿದರ್ಶನ. ಕುಸುಮಾ ಮತ್ತು ಅಪರಿಚಿತ ವ್ಯಕ್ತಿಗಳು ಎಂದು ನಮೂದಿಸಿದ್ದಾರೆ. ಹಾಗಾದರೆ ನಾನು ಈ ರಾಜ್ಯದಲ್ಲಿ ಅನಾಮಧೇಯ ವ್ಯಕ್ತಿಯಾ?'' ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು. ''ಇದೊಂದು ದುರುದ್ದೇಶ ಪೂರಿತ ದೂರು. ನಾನು ರಾಜರಾಜೇಶ್ವರಿನಗರ ಬಿಬಿಎಂಪಿ ಕಚೇರಿಗೆ ಭೇಟಿ ನೀಡಿದ್ದೇ 11.45ಕ್ಕೆ. ಆದರೆ ದೂರಿನಲ್ಲಿ 11.15ಕ್ಕೆ ಘಟನೆ ನಡೆದಿದೆ ಎಂದು ಹೇಳಿದ್ದಾರೆ. ಕುಸುಮಾ ಅವರೇನು ಪೊಲೀಸರನ್ನು ತಳ್ಳಿ ಒಳಕ್ಕೆ ಹೋದರಾ?'' ಎಂದು ಪ್ರಶ್ನಿಸಿದರು.